ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

**ಕರ್ನಾಟಕ ವಿಧಾನ ಪರಿಷತ್ತು**

ನೂರ ನಲವತ್ತೆರಡನೆಯ ಅಧಿವೇಶನ

ಬುಧವಾರ, ದಿನಾಂಕ: 09ನೇ ಡಿಸೆಂಬರ್, 2020

ಇನಾಮಿ ಜಮೀನನ್ನು ಕೃಷಿಯೇತರ (ಎನ್.ಎ) ಜಮೀನಾಗಿ ಮಾಡಿರುವ ಬಗ್ಗೆ

ಶ್ರೀ ಅರವಿಂದಕುಮಾರ್‌ಅರಳಿ (ವಿಧಾನಸಭೆಯಿಂದ ಚುನಾಯಿತರಾದವರು):-

162 (265) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ :-

(ಅ) ಕಳೆದ ಅಧಿವೇಶನದಲ್ಲಿ ಭರವಸೆ ನೀಡಿದಂತೆ ಎಸ್.ಸಿ./ಎಸ್.ಟಿ.ಗಳಿಗೆ ನೀಡಲಾದ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ಮಾರಾಟ ಮಾಡಲು ಅವಕಾಶವಿದೆಯೇ; ಇಲ್ಲದಿದ್ದಲ್ಲಿ, ಈ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಮಾಡಿ ನಿವೇಶನಗಳನ್ನು ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಬಗ್ಗೆ ಸರ್ಕಾರ ತೆಗೆದುಕೊಂಡ ಕ್ರಮಗಳೇನು; ಈ ಜಮೀನಿನ ವಿಸ್ತೀರ್ಣವೇನು ;

(ಆ) ಬೀದರ್ ನಗರದ ಕುಂಬಾರವಾಡ ಸರ್ವೆ ಸಂಖ್ಯೆ: 35ರ ಇನಾಮಿ ಜಮೀನನ್ನು ಕೃಷಿಯೇತರ ಜಮೀನನ್ನಾಗಿ ಪರಿವರ್ತಿಸಿ ನಿವೇಶನಗಳ ಮಾರಾಟ ಮಾಡುತ್ತಿರುವ ಬಗ್ಗೆ ಹಿಂದಿನ ಅಧಿವೇಶನದಲ್ಲಿ ತನಿಖೆ ನಡೆಸುವುದಾಗಿ ಈ ಹಿಂದೆ ಸದನದಲ್ಲಿ ಆಶ್ವಾಸನೆ ನೀಡಿದ್ದರೂ ಇಲ್ಲಿಯವರೆಗೆ ತನಿಖೆ ನಡೆಸದಿರಲು ಕಾರಣಗಳೇನು ;

(ಇ) ಬೀದರ್ ಜಿಲ್ಲೆಯಲ್ಲಿ ನೆರೆ ಹಾವಳಿಗೆ ತುತ್ತಾದ ಜಮೀನು ಎಷ್ಟು; ಸಂತ್ರಸ್ಥರಿಗೆ ಪರಿಹಾರ ನೀಡಲು ವಿಳಂಬವಾಗುತ್ತಿರುವುದಕ್ಕೆ ಕಾರಣವೇನು ?